ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 25ನೇ ಜುಲೈ 1896.

1. ಕಂದಾಯದ ಬಾಕಿದಾರರಾದ ಮೇಲಿನ ಹುಲವತ್ತಿ ದತ್ತಾತ್ರಯ ಪೀತದ ಡಾಕ್ಟರ್ ಸಿದ್ಧಿಸ್ಮಿತ್ ಮತ್ತು ಬಿಯೆ. ಬ್ಯಿಬೊಯವರಿಂದ ಬರಬೇಕಾದ ಜಮ್ಮಿ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ, ಸರಕಾರಕ್ಕೆ ದಂಡವಾಗಿ ಶೇರಿಸಿಕೊಳ್ಳಲ್ಪಟ್ಟ ಇಧೆಯಂತ ಅಪ್ಪಣೆ ಮಾಡಲ್ಪಟ್ಟ ಸ್ಥಿರಸ್ವತ್ತು ಕಡೂರ್ ಡಿಸ್ಟ್ರಿಕ್ಟ್ ಚಿಕ್ಕಮಗಳೂರು ತಾಲ್ಲೂಕು ಕಚೇರಿಯಲ್ಲಿ ಸ್ ೧೮೯೬ನೇ ಇಸವಿ ಸೆಪ್ಟಂಬರ್ 5ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟ ಇಧೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1896ನೇ ಸಾಲಿಗೆ ಪೂರ್ತಿಯಾಗಿ* ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಫ್ಸೀಲ್ ಮೇರಿಗೆ 1,242–10–9 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿಮಾಡಲ್ಪಡದೆ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್‌ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಅತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರ್ಟಿಫಿಕೇಟ್ ಅತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ವುಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ಮಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬ್ಯಾಕಿದಾರರ ಹೆಸರು.	ಸ್ಥಿತಿನ ತಪ್ಸೀಲ್.						ಸರ್ಕಾರಕ್ಕೆ ಬರಬೇಕಾದ ನೋಟು ಬಾಕಿ ಇಲ್ಲಾ ಹೆಚ್ಚಾಗಿ ಸೊತವಾದ ಬಾಕಿ ಇದ್ದಲ್ಲಿ ಅದು.
				ಕಟ್ಟಡಗಳು.		ಜಮೀನು.				
				ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು.	ನಂಬರ್ ಅಥವಾ ಜಮೀನಿನ ಹೆಸರು.	ಮಿನಿಸ್ಟ್ರಿ ತರೀ ಅಥವಾ ಬಾಣಾ ರುತ್ತು.	ವಿಸ್ತೀರ್ಣ.	ಅಂದಾಜು.	
1	2	3	4	5	6	7	8	9	10	11
					ರೂ.ಆ.ಪೈ.			ಎಕರೆ. ಗುಂಟೆ.	ರೂ. ಆ. ಪೈ.	ರೂ. ಆ. ಪೈ.
ಚಿಕ್ಕನಾಯಕನಹಳ್ಳಿ.	ಜಾಗೀರು.	ನೇಲಿನ ಹುಲಿಯಲ್ಲಿ.	ಡಾಕ್ಟರ್ ಸಿಡ್ನಿಸ್ಮಿತ್ ಮತ್ತು ಬಿಯೆ. ಬ್ರೈಟೊ ಯವರು.	..	..	17	ಕಾಫಿ	79 12	119 0 0	1242 10 9
						48	ಡಿಟೋ	17 33	27 0 0	
										ಪಾವತಿ ತಾರೀಖು ವರಿಗಿನ ಬಡ್ಡಿ ವಗೈರೆ

* ಯಾ ಬಾಕಿ ಇರುವ ಮಟ್ಟಿಗೆ ಸಂದರ್ಭಾನುಸಾರ ನವೂದಿಸತಕ್ಕದ್ದು:

ಹೆಚ್. ಹೆಚ್. ಸ್ಪರ್ಕ್ಸ್,
ಡೆಪ್ಯುಟಿ ಕಮ್ಮಿಷನರ್.

Mysore Govt. Central Press, Bangalore.—1896.